**Akashvani : Bangalore**
**National Bulletin In Kannada**
**06.10.2023 / 13.10**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**06.10.2023 / 13.10**

**<><*<><>*><>**

## ಮುಖ್ಯಾಂಶಗಳು

೧. ಆರ್‌ಬಿಐ ಹಣಕಾಸು ನೀತಿ ಪ್ರಕಟ; ರೆಪೊ ದರದಲ್ಲಿ ಯಾವುದೇ ಬದಲಾವಣೆ ಇಲ್ಲ - ಗವರ್ನರ್ ಶಕ್ತಿಕಾಂತ್ ದಾಸ್

೨. ಭಾರತ-ಯುಎಇ ನಡುವೆ ಕಾರ್ಯ ತಾಂತ್ರಿಕ ಪಾಲುದಾರಿಕೆ ಒಪ್ಪಂದಕ್ಕೆ ಸಹಿ

೩. ಪ್ರವಾಹ ಪೀಡಿತ ಸಿಕ್ಕಿಂಗೆ ೪೫ ಕೋಟಿ ರೂಪಾಯಿ ಪರಿಹಾರ ಬಿಡುಗಡೆಗೆ ಕೇಂದ್ರ ಸರ್ಕಾರ ಅನುಮೋದನೆ

೪. ವಿಶ್ವಕಪ್ ಕ್ರಿಕೆಟ್; ಎರಡನೇ ಪಂದ್ಯದಲ್ಲಿ ಪಾಕಿಸ್ತಾನ-ನೆದರ್ಲೆಂಡ್ಸ್ ಮುಖಾಮುಖಿ

**<><*<><>*><>**

ರೆಪೊ ದರದಲ್ಲಿ ಯಾವುದೇ ಬದಲಾವಣೆ ಮಾಡದೇ ಶೇಕಡ ೬.೫ರಷ್ಟನ್ನೇ ಉಳಿಸಿಕೊಳ್ಳಲು ಆರ್‌ಬಿಐ ಹಣಕಾಸು ನೀತಿ ಸಮಿತಿ ಒಮ್ಮತದಿಂದ ನಿರ್ಧರಿಸಿದೆ ಎಂದು ಆರ್‌ಬಿಐನ ಗವರ್ನರ್ ಶಕ್ತಿಕಾಂತ್ ದಾಸ್ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಅವರು, ಎಲ್ಲ ಅಂಶಗಳನ್ನು ವ್ಯಾಪಕವಾಗಿ ಪರಿಶೀಲಿಸಿದ ಬಳಿಕ ಎಂಪಿಸಿ ಈ ನಿರ್ಧಾರವನ್ನು ಕೈಗೊಂಡಿದೆ. ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಹಣದುಬ್ಬರ ದರ ಶೇಕಡ ೪.೬ರಷ್ಟು ದಾಖಲಾಗಿದೆ. ಕಳೆದ ವರ್ಷದ ಮೊದಲ ತ್ರೈಮಾಸಿಕದಲ್ಲಿ ಶೇಕಡ ೭.೩ರಷ್ಟಿತ್ತು ಎಂದು ಹೇಳಿದ್ದಾರೆ. ಎಲ್ಲ ಅಂಶಗಳನ್ನು ಪರಿಗಣಿಸಿ, ನೈಜ ಜಿಡಿಪಿ ಬೆಳವಣಿಗೆ ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇಕಡ ೬.೫ರಷ್ಟಾಗುವ ಅಂದಾಜಿದೆ. ಮುಂದಿನ ವರ್ಷ ಜಿಡಿಪಿ ಶೇಕಡ ೬.೬ರಷ್ಟು ಇರಲಿದೆ ಎಂದು ಅಂದಾಜಿಸಲಾಗಿದೆ. ಆಹಾರ ಹಣದುಬ್ಬರ ದರ ಇನ್ನೂ ತಗ್ಗಲಿದೆ. ಭಾರತೀಯ ಬ್ಯಾಂಕುಗಳು ಇನ್ನೂ ಚೇತರಿಕೆ ಹಾದಿಯಲ್ಲಿ ಮುನ್ನಡೆಯುತ್ತಿದೆ. ಜಾಗತಿಕ ಸ್ಥಿತಿಗತಿಗೆ ಹೋಲಿಸಿದರೆ, ದೇಶೀಯ ಆರ್ಥಿಕ ಚಟುವಟಿಕೆಗಳು ಚೇತರಿಸಿಕೊಂಡಿದ್ದು, ಎರಡನೇ ತ್ರೈಮಾಸಿಕದಲ್ಲಿ ಕೃಷಿ ಚಟುವಟಿಕೆಗಳು ಹೆಚ್ಚಾಗಿವೆ ಎಂದು ಅವರು ಹೇಳಿದರು. ಆರ್‌ಬಿಐ

ಆರ್ಥಿಕ ಸ್ಥಿರತೆಯನ್ನು ಕಾಯ್ದುಕೊಳ್ಳಲು ಎಲ್ಲ ರೀತಿಯ ನೀತಿ-ನಿರೂಪಣೆಗಳನ್ನು ಕೈಗೊಳ್ಳುತ್ತಿದೆ. ಪಾವತಿ ಮೂಲಸೌಕರ್ಯ ಅಭಿವೃದ್ಧಿ ನಿಧಿಯಲ್ಲಿ ೨೦೨೫ರ ಡಿಸೆಂಬರ್‌ವರೆಗೆ ಮುಂದುವರೆಸಲಾಗುವುದು ಎಂದು ಶಕ್ತಿಕಾಂತ್ ದಾಸ್ ತಿಳಿಸಿದರು.

<><*<><>*><>

ಕಳೆದ ಒಂಬತ್ತು ವರ್ಷಗಳಲ್ಲಿ ದೇಶದಲ್ಲಿ ಎಲ್ಲಾ ರೀತಿಯ ಭಯೋತ್ಪಾದನೆಯನ್ನು ದೃಢವಾಗಿ ನಿಗ್ರಹಿಸುವಲ್ಲಿ ಕೇಂದ್ರ ಮತ್ತು ರಾಜ್ಯದ ಸಂಸ್ಥೆಗಳು ಯಶಸ್ವಿಯಾಗಿವೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ರಾಷ್ಟ್ರೀಯ ತನಿಖಾ ಸಂಸ್ಥೆ ಆಯೋಜಿಸಿದ್ದ ಎರಡು ದಿನಗಳ ಭಯೋತ್ಪಾದನಾ ನಿಗ್ರಹ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಎನ್‌ಐಎ ವ್ಯಾಪ್ತಿಯಲ್ಲಿ ಮಾದರಿ ಭಯೋತ್ಪಾದನಾ ನಿಗ್ರಹ ವ್ಯವಸ್ಥೆಯನ್ನು ಸ್ಥಾಪಿಸಬೇಕು. ಕೇಂದ್ರ ಮತ್ತು ರಾಜ್ಯಗಳ ಭದ್ರತಾ ಸಂಸ್ಥೆಗಳ ನಡುವಿನ ಉತ್ತಮ ಸಮನ್ವಯಕ್ಕಾಗಿ ಎಲ್ಲಾ ರಾಜ್ಯಗಳಲ್ಲಿನ ಎಲ್ಲಾ ಭಯೋತ್ಪಾದನಾ ನಿಗ್ರಹ ಸಂಸ್ಥೆಗಳ ರಚನೆ ಮತ್ತು ತನಿಖೆಯ ಮಾರ್ಗಸೂಚಿಗಳನ್ನು ಏಕರೂಪಗೊಳಿಸಬೇಕು ಎಂದು ಹೇಳಿದರು. ಹೊಸ ಭಯೋತ್ಪಾದಕ ಸಂಘಟನೆ ರಚನೆಯಾಗದಂತೆ ಎಲ್ಲಾ ಭಯೋತ್ಪಾದನಾ ನಿಗ್ರಹ ಸಂಸ್ಥೆಗಳು ಇಂತಹ ನಿರ್ದಯ ವಿಧಾನವನ್ನು ಅಳವಡಿಸಿಕೊಳ್ಳಬೇಕು ಎಂದು ಗೃಹ ಸಚಿವರು ಒತ್ತಿ ಹೇಳಿದರು. ಎನ್‌ಐಎ, ಭಯೋತ್ಪಾದನಾ ನಿಗ್ರಹ ದಳ ಮತ್ತು ವಿಶೇಷ ಕಾರ್ಯಪಡೆಗಳ ಕಾರ್ಯವು ತನಿಖೆಗೆ ಸೀಮಿತವಾಗದೆ ಭಯೋತ್ಪಾದನೆಯನ್ನು ಎದುರಿಸಲು ಆಲೋಚಿಸಬೇಕು ಮತ್ತು ವಿನೂತನ ಕ್ರಮಗಳನ್ನು ತೆಗೆದುಕೊಳ್ಳಬೇಕು. ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ಜಾಗತಿಕ ಮಟ್ಟದಿಂದ ತಳಮಟ್ಟದವರೆಗೆ ಸಹಕಾರದ ಅಗತ್ಯವಿದೆ ಎಂದು ಅವರು ಹೇಳಿದರು.

<><*<><>*><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಎರಡು ದಿನಗಳ ಯುಎಇ ಪ್ರವಾಸ ಕೈಗೊಂಡಿದ್ದಾರೆ. ಮೊದಲ ದಿನವಾದ ನಿನ್ನೆ ಅವರು ೧೧ನೇ ಯುಎಇ-ಭಾರತ ಉನ್ನತ ಮಟ್ಟದ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಅವರೊಂದಿಗೆ ಯುಎಇ ವಾಣಿಜ್ಯ ಸಚಿವ ಶೇಖ್ ಅಹಮದ್ ಬಿನ್ ಝ್ಯುಯದ್ ಅಲ್ ನಹ್ಯಾನ್ ಅವರು ಭಾಗವಹಿಸಿದ್ದರು. ಸಭೆಯಲ್ಲಿ ಉಭಯ ನಾಯಕರು ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆ ಮತ್ತು ಭವಿಷ್ಯದಲ್ಲಿ ಜಂಟಿ ವ್ಯಾಪಾರ ಮತ್ತು ಹೂಡಿಕೆ ಸಹಕಾರ ಕುರಿತಂತೆ ಸಮಾಲೋಚನೆ ನಡೆಸಿದರು. ಈ ವೇಳೆ

ಮಾತನಾಡಿದ ಪಿಯೂಶ್ ಗೋಯಲ್, ಭಾರತ ಮತ್ತು ಯುಎಇ ನಡುವಿನ ದ್ವಿಪಕ್ಷೀಯ ವ್ಯಾಪಾರ ೧೦೦ ಬಿಲಿಯನ್ ಡಾಲರ್‌ಗೆ ವಿಸ್ತರಿಸುವ ಗುರಿ ಹೊಂದಲಾಗಿದೆ ಎಂದರು. ಉಭಯ ದೇಶಗಳು ಕಾರ್ಯತಾಂತ್ರಿಕ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕಿದವು ಮತ್ತು ಭಾರತೀಯ ರುಪೇ ಕಾರ್ಡ್ ಆಧರಿಸಿ ಯುಎಇ ಪಾವತಿ ಕಾರ್ಡ್ ಆರಂಭಕ್ಕೆ ಸಮ್ಮತಿ ಸೂಚಿಸಿದವು.

<><*<><>*><>

ಸಾಮಾನ್ಯ ಜನರ ಅನುಕೂಲಕ್ಕಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹೋಮಿಯೋಪತಿ ಚಿಕಿತ್ಸೆಗೆ ಕೇಂದ್ರ ಸರ್ಕಾರ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಆಯುಷ್ ಖಾತೆ ರಾಜ್ಯ ಸಚಿವ ಡಾ.ಎಂ.ಮಹೇಂದ್ರ ಬಾಯ್ ಹೇಳಿದ್ದಾರೆ. ಅವರು, ಕೊಲ್ಕತ್ತಾದಲ್ಲಿ ನಿನ್ನೆ ಹೋಮಿಯೋಪತಿ ಕುರಿತಾದ ಕೇಂದ್ರೀಯ ಸಂಶೋಧನಾ ಮಂಡಳಿಯ ಪ್ರಾದೇಶಿಕ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರ ಜಿಲ್ಲಾ ಆಸ್ಪತ್ರೆ, ಏಮ್ಸ್ ಸೇರಿದಂತೆ ಎಲ್ಲ ಆಸ್ಪತ್ರೆಗಳಲ್ಲಿ ಇದೀಗ ಹೋಮಿಯೋಪತಿ ಚಿಕಿತ್ಸೆ ಲಭ್ಯವಿದೆ. ಏಮ್ಸ್ ಆಸ್ಪತ್ರೆಗಳು ಅತಿ ಕಡಿಮೆ ದರದಲ್ಲಿ ಹೋಮಿಯೋಪತಿ ಚಿಕಿತ್ಸೆಗಳನ್ನು ನೀಡುತ್ತಿವೆ ಎಂದು ಹೇಳಿದರು. ೨೦೧೪ಕ್ಕೂ ಮುನ್ನ ಆಯುಷ್ ಚಿಕಿತ್ಸಾ ಪದ್ಧತಿಗಳಿಗೆ ಹೆಚ್ಚಿನ ಪ್ರಾಮುಖ್ಯತೆ ದೊರೆತಿರಲಿಲ್ಲ. ಆದರೆ, ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಆಯುಷ್ ಚಿಕಿತ್ಸಾ ಪದ್ಧತಿಗಳ ಉತ್ತೇಜನಕ್ಕೆ ಪ್ರತ್ಯೇಕ ಸಚಿವಾಲಯವನ್ನು ತೆರೆದು ಅದಕ್ಕೆ ನೀಡುತ್ತಿದ್ದ ಅನುದಾನವನ್ನು ನಾಲ್ಕು ಪಟ್ಟು ಹೆಚ್ಚಳ ಮಾಡಿದೆ ಎಂದು ತಿಳಿಸಿದರು.

<><*<><>*><>

ಛತ್ತೀಸ್‌ಗಢದಲ್ಲಿ ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಗಾಗಿ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. ಅಲ್ಲದೇ, ರಾಜ್ಯದ ಎಲ್ಲ ಮತಗಟ್ಟೆಗಳಲ್ಲಿ ಪಟ್ಟಿಯನ್ನು ಪ್ರದರ್ಶಿಸಲಾಗಿದೆ. ವಿಶೇಷ ಮತದಾರರ ನೋಂದಣಿ ಅಭಿಯಾನದ ಬಳಿಕ ರಾಜ್ಯದಲ್ಲಿ ಸುಮಾರು ೭ ಲಕ್ಷ ೧೯ ಸಾವಿರ ಮತದಾರರು ಸೇರ್ಪಡೆಯಾಗಿದ್ದಾರೆ. ಒಟ್ಟಾರೆ ರಾಜ್ಯದಲ್ಲಿ ಸದ್ಯ ಸುಮಾರು ೨ ಕೋಟಿ ೩ ಲಕ್ಷ ಮತದಾರರಿದ್ದಾರೆ. ಪುರುಷರಗಿಂತ ಮಹಿಳ ಮತದಾರರ ಸಂಖ್ಯೆ ಹೆಚ್ಚಾಗಿದೆ.

<><*<><>*><>

ಪ್ರವಾಹ ಪೀಡಿತ ಸಿಕ್ಕಿಂಗೆ ಪರಿಹಾರ ರೂಪದಲ್ಲಿ ೪೫ ಕೋಟಿ ರೂಪಾಯಿ ಬಿಡುಗಡೆಗೆ ಕೇಂದ್ರ ಸರ್ಕಾರ ಇಂದು ಒಪ್ಪಿಗೆ ನೀಡಿದೆ. ಈ ಹಣವನ್ನು ೨೦೨೩-೨೪ನೇ ಸಾಲಿನಲ್ಲಿ ರಾಜ್ಯ ವಿಪತ್ತು ನಿರ್ವಹಣಾ ನಿಧಿಯಡಿ ಕೇಂದ್ರದ ಪಾಲಿನಿಂದ ನೀಡಲಾಗುವುದು. ಇದರಿಂದಾಗಿ ಪ್ರವಾಹ ಬಾಧಿತ

ಜನರಿಗೆ ತಕ್ಷಣಕ್ಕೆ ಪರಿಹಾರ ನೀಡಲು ನೆರವಾಗಲಿದೆ. ದೀಡರನೇ ಉಂಟಾದ ಪ್ರವಾಹದಿಂದಾಗಿ ಆಗಿರುವ ತೊಂದರೆ ಹಾಗೂ ಹಾನಿಯ  ಬಗ್ಗೆ ಪರಿಶೀಲಿಸಲು ಕೇಂದ್ರ ಗೃಹ ಸಚಿವಾಲಯ ಅಂತರ ಸಚಿವಾಲಯ ತಂಡವನ್ನು ರಚಿಸಿದೆ. ಈ ತಂಡ ಸದ್ಯದಲ್ಲೇ ಸಿಕ್ಕಿಂನ ಹಲವು ಪ್ರದೇಶಗಳಿಗೆ ಭೇಟಿ ನೀಡಿ, ಪ್ರವಾಹದಿಂದ ಉಂಟಾಗಿರುವ ಹಾನಿಯನ್ನು ಪರಿಶೀಲಿಸಲಿದೆ.  ಸಿಕ್ಕಿಂನಲ್ಲಿ ಪರಿಸ್ಥಿತಿಯನ್ನು ಕೇಂದ್ರ ಸರ್ಕಾರ ನಿಗಾವಹಿಸುತ್ತಿದೆ. ಅಲ್ಲದೇ, ಪರಿಸ್ಥಿತಿ ಸುಧಾರಿಸಲು ಸಿಕ್ಕಿಂ ಸರ್ಕಾರಕ್ಕೆ ಎಲ್ಲ ರೀತಿಯ ನೆರವನ್ನು ನೀಡಲಾಗುತ್ತಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಭಾರತೀಯ ವಾಯುಪಡೆ ಹೆಲಿಕಾಪ್ಟರ್ ಹಾಗೂ ಸಿಬ್ಬಂದಿ ಅಗತ್ಯ ಶೋಧನಾ ಹಾಗೂ ರಕ್ಷಣಾ ಕಾರ್ಯ ಕೈಗೊಂಡಿವೆ. ಪ್ರವಾಹದಿಂದಾಗಿ ರಸ್ತೆ ಹೆದ್ದಾರಿ ಹಾಗೂ ಮೂಲ ಸೌಕರ್ಯ ವ್ಯಾಪಕ ಹಾನಿಗೆ ಒಳಗಾಗಿದೆ.

<><*<><>*><>

ಸರ್ಕಾರವು ನೀಡಿದ ಯಾವುದೇ ಗುರುತು ಮತ್ತು ವಿಳಾಸ ಪುರಾವೆಯೊಂದಿಗೆ ನಾಗರಿಕರು ಈಗ ಡ್ರೋಣ್ ಪೈಲಟ್‌ಗಳಾಗಬಹುದು ಎಂದು ನಾಗರಿಕ ವಿಮಾನಯಾನ ಸಚಿವಾಲಯ ಹೇಳಿದೆ. ಡ್ರೋಣ್ ಪೈಲಟ್‌ಗಳಿಗಾಗಿ ಹೊಸ ಡ್ರೋಣ್ ತಿದ್ದುಪಡಿ ನಿಯಮಗಳು ೨೦೨೩ ಕುರಿತು ಸಚಿವಾಲಯವು ಅಧಿಸೂಚನೆ ಹೊರಡಿಸಿದೆ. ತಿದ್ದುಪಡಿಯ ನಂತರ, ಡ್ರೋಣ್ ಪೈಲಟ್ ಆಗಿದ್ದರೆ ರಿಮೋಟ್ ಪೈಲಟ್ ಪ್ರಮಾಣಪತ್ರಕ್ಕಾಗಿ ಅರ್ಜಿ ಸಲ್ಲಿಸಲು ಸರ್ಕಾರ ನೀಡಿದ ಗುರುತಿನ ಪುರಾವೆ ಮತ್ತು ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ ಅಥವಾ ವಾಹನ ಚಾಲನಾ ಪರವಾನಗಿಯಂತಹ ವಿಳಾಸದ ಸರ್ಕಾರ ನೀಡಿದ ಪುರಾವೆಗಳನ್ನು ಈಗ ಸ್ವೀಕರಿಸಬಹುದು ಎಂದು ಸ್ಪಷ್ಟಪಡಿಸಲಾಗಿದೆ. ಮಹತ್ವಾಕಾಂಕ್ಷೆಯ ಡ್ರೋಣ್ ಪೈಲಟ್‌ಗಳಿಗೆ ಪಾಸ್‌ಪೋರ್ಟ್ ಹೊಂದಿರಬೇಕೆನ್ನುವ  ಪೂರ್ವಾಪೇಕ್ಷೆಯು ಅಡಚಣೆಯಾಗಿತ್ತು ಮತ್ತು ಈ ಹೊಸ ಪ್ರಯತ್ನವು ದೇಶಾದ್ಯಂತ ಡ್ರೋಣ್ ಕಾರ್ಯಾಚರಣೆಗಳನ್ನು ಮತ್ತಷ್ಟು ಉದಾರೀಕರಣಗೊಳಿಸಲು, ಉತ್ತೇಜಿಸಲು ಮತ್ತು ಸುಗಮಗೊಳಿಸಲು ಮತ್ತು ೨೦೩೦ರ ವೇಳೆಗೆ ಭಾರತವನ್ನು ಜಾಗತಿಕ ಡ್ರೋಣ್ ಕೇಂದ್ರವನ್ನಾಗಿ ಮಾಡಲು ನೆರವಾಗಲಿದೆ ಎಂದು ಸಚಿವಾಲಯ ತಿಳಿಸಿದೆ. ಹೊಸ ನಿಯಮ ಕಳೆದ ತಿಂಗಳ ೨೭ರಿಂದ ಜಾರಿಗೆ ಬಂದಿದೆ.

<><*<><>*><>

ಆಡಳಿತ ಸುಧಾರಣಾ ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆ ವಿಶೇಷ ಸ್ವಚ್ಛತಾ ಅಭಿಯಾನ ೩.೦ ಅಡಿಯಲ್ಲಿ ಕೈಗೊಂಡಿರುವ ಸರ್ಕಾರಿ ಕಚೇರಿಗಳನ್ನು ಶುಚಿಗೊಳಿಸುವ ಕಾರ್ಯ

ಸಮಾರೋಪಾದಿಯಲ್ಲಿ ಸಾಗಿದೆ. ಈ ಅಭಿಯಾನ ಸೆಪ್ಟೆಂಬರ್ ೧೫ ರಿಂದ ಆರಂಭವಾಗಿದ್ದು, ಅದರಡಿ ಯಾವ್ಯಾವ ರೀತಿ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳಬಹುದು ಎಂಬ ಕುರಿತು ಗುರಿಗಳನ್ನು ನಿಗದಿಪಡಿಸಲಾಗಿತ್ತು. ಮುಖ್ಯ ಅಭಿಯಾನ ಇದೇ ಅಕ್ಟೋಬರ್ ೨ ರಿಂದ ಆರಂಭವಾಗಿದ್ದು, ಅಕ್ಟೋಬರ್ ೩೧ರವರೆಗೆ ಮುಂದುವರೆಯಲಿದೆ. ಸಂಸದೀಯ ವ್ಯವಹಾರಗಳ ಸಚಿವಾಲಯ ಕೂಡ ತನ್ನ ವ್ಯಾಪ್ತಿಯಲ್ಲಿ ಅಭಿಯಾನವನ್ನು ಕೈಗೊಂಡಿದೆ. ಅಂತೆಯೇ, ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಕೂಡ ಮುಖ್ಯ ಸಚಿವಾಲಯ ಹಾಗೂ ಅಧೀನ ಕಚೇರಿಗಳಲ್ಲಿ ವಿಶೇಷ ಸ್ವಚ್ಛತಾ ಅಭಿಯಾನವನ್ನು ಕೈಗೊಂಡಿವೆ. ಈ ಅಭಿಯಾನದಡಿ ಕಚೇರಿಗಳ ಸ್ವಚ್ಛತಾ ಕಾರ್ಯ ಸೇರಿದಂತೆ ಹಲವು ಚಟುವಟಿಕೆಗಳನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ.

<><*<><>*><>

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಕಾಯಿದೆ -ಮನ್ರೇಗಾ ಕಾರ್ಯಕ್ರಮದ ಅನುಷ್ಠಾನಕ್ಕೆ ಹಣದ ಲಭ್ಯತೆ ನಿರ್ಬಂಧವಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ಹೇಳಿದೆ. ಮನ್ರೇಗಾ ಬೇಡಿಕೆ-ಆಧರಿತ ವೇತನ ಉದ್ಯೋಗ ಕಾರ್ಯಕ್ರಮವಾಗಿದೆ ಮತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಹಣವನ್ನು ಬಿಡುಗಡೆ ಮಾಡುವುದು ನಿರಂತರ ಪ್ರಕ್ರಿಯೆಯಾಗಿದೆ ಎಂದು ಅದು ಹೇಳಿದೆ. ಕೆಲಸದ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರವು ಹಣವನ್ನು ಒದಗಿಸುತ್ತಿದೆ. ತಳಮಟ್ಟದಲ್ಲಿ ಕಾಮಗಾರಿಗಳ ಬೇಡಿಕೆ ಪೂರೈಸಲು ಅಗತ್ಯವಿರುವಾಗ ಮತ್ತು ಅಗತ್ಯವಿದ್ದಾಗ ಸಚಿವಾಲಯವು ಯೋಜನೆಗೆ ಹೆಚ್ಚುವರಿ ಹಣವನ್ನು ಒದಗಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಮುಂಬೈನ ಗೋರೆಗಾಂವ್‌ನ ಆಜಾದ್ ಮೈದಾನದ ಬಳಿ ಐದು ಅಂತಸ್ತಿನ ಕಟ್ಟಡದಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಅಗ್ನಿ ದುರಂತದಲ್ಲಿ ಆರು ಮಂದಿ ಮೃತಪಟ್ಟು, ೩೧ ಮಂದಿ ಗಾಯಗೊಂಡಿದ್ದಾರೆ. ೩೦ ಮಂದಿಯನ್ನು ಬೆಂಕಿಯ ಕೆನ್ನಾಲಿಗೆಯಿಂದ ರಕ್ಷಿಸಲಾಗಿದೆ. ಬೆಂಕಿ ತಳ ಮಹಡಿಯ ಅಂಗಡಿ ಮಳಿಗೆಗಳು ಹಾಗೂ ವಾಹನ ನಿಲುಗಡೆ ಪ್ರದೇಶವನ್ನು ಆವರಿಸಿಕೊಂಡಿದೆ. ಅಗ್ನಿಶಾಮಕ ದಳ ಬೆಂಕಿ ನಂದಿಸಲು ಪ್ರಯತ್ನ ನಡೆಸಿದೆ. ಈ ಮಧ್ಯೆ, ತಮಿಳುನಾಡಿನಲ್ಲಿನ ನಾಗಪಟ್ಟಣಂನಲ್ಲಿ ನಿನ್ನೆ ಪಟಾಕಿ ಉತ್ಪಾದನೆ ಘಟಕದಲ್ಲಿ ಸಂಭವಿಸಿದ ಸ್ಫೋಟದಲ್ಲಿ ನಾಲ್ಕು ಮಂದಿ ಮೃತಪಟ್ಟಿದ್ದಾರೆ.

<><*<><>*><>

ಭಾರತೀಯ ಮೂಲದ ಫ್ರೋಫೆಸರ್ ಜೊಯೀತಾ ಗುಪ್ತಾ ಅವರಿಗೆ ಹವಾಮಾನ ವೈಪರೀತ್ಯ ವಲಯದಲ್ಲಿ ನೀಡುವ ಪ್ರತಿಷ್ಠಿತ ಸ್ಪಿನೋಜಾ ಪ್ರಶಸ್ತಿ ನೀಡಲಾಗಿದೆ.  ನೆದರ್ಲ್ಯಾಂಡ್ಸ್‌ನಲ್ಲಿ ನಡೆದ ಸಮಾರಂಭದಲ್ಲಿ ಶಿಕ್ಷಣ, ವಿಜ್ಞಾನ ಮತ್ತು ಸಂಸ್ಕೃತಿ ಸಚಿವ ರಾಬರ್ಟ್ ಡಿಜಿಗ್ರಾಫ್ ಪ್ರಶಸ್ತಿ ಪ್ರದಾನ ಮಾಡಿದರು. ಈ ಪ್ರಶಸ್ತಿ ಮೊತ್ತ ೧.೫ ಮಿಲಿಯನ್ ಯೂರೋ ಡಾಲರ್ ಆಗಿದೆ.

<><*<><>*><>

ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎರಡನೇ ಪಂದ್ಯದಲ್ಲಿ ಇಂದು ಪಾಕಿಸ್ತಾನ ಹಾಗೂ ನೆದರ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ  ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ. ಗುಜರಾತ್‌ನ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಪುರುಷರ ವಿಶ್ವಕಪ್ ಉದ್ಘಾಟನಾ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ನ್ಯೂಜಿಲೆಂಡ್ ೯ ವಿಕೆಟ್‌ಗಳ ಜಯ ಸಾಧಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>